ಅ) ಆಳಂದ ತಾಲ್ಲೂಕಿನಲ್ಲಿ 5 ಹರಿಜನ ತಾಂಡಗಳಿಗೆ ಮತ್ತು ಗುಲ್ಬರ್ಗಾ ತಾಲ್ಲೂಕಿನಲ್ಲಿ 5 ಹರಿಜನ ತಾಂಡಗಳಿಗೆ ಒಟ್ಟು 10 ಕಿರುನೀರು ಸರಬರಾಜು ಯೋಜನೆಗಳನ್ನು ಇನ್ನೂ ಅನುಷ್ಠಾನಗೊಳಿಸಬೇಕಾಗಿದೆ. ಇವುಗಳನ್ನು 1997-98ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುವುದು.

**ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ**

2208 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಸನ್ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಎಲ್ಲಾ ವರ್ಗದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು?*

*ಆ) ಅವುಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು?*

*ಇ) ಖಾಲಿ ಇರುವ ಎಲ್ಲಾ ವರ್ಗದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?*

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಒಟ್ಟು 5841 ಹುದ್ದೆಗಳು ಖಾಲಿ ಇರುತ್ತದೆ.

ಆ) ಒಟ್ಟು 95 ವೈದ್ಯರ ಹುದ್ದೆಗಳು ಖಾಲಿ ಇರುತ್ತದೆ.

ಇ) ನೇರ ನೇಮಕಾತಿ ಮತ್ತು ಪದೋನ್ನತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

**ಜಿಲ್ಲಾ ಪಂಚಾಯತ್, ತಾಲ್ಲೂಕ್ ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಸದಸ್ಯರಿಗೆ ಗೌರವ ಧನ.**

2209 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ಪಾಜ್ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಜಿಲ್ಲಾ ಪಂಚಾಯತ್ ಸದಸ್ಯರು, ತಾಲ್ಲೂಕು ಪಂಚಾಯತ್ ಸದಸ್ಯರು, ಗ್ರಾಮ ಪಂಚಾಯತ್ ಸದಸ್ಯರಿಗೆ ಸರ್ಕಾರವು ಗೌರವಧನ ನೀಡುತ್ತಿದೆಯೇ?*

*ಆ) ಇಲ್ಲದೇ ಇದ್ದರೆ, ಗೌರವಧನ ಕೊಡುತ್ತಿರುವುದಾಗಿ ಸರ್ಕಾರವು ತಿಳಿಸಿರುವುದು ಸರಿಯೇ?*

*ಇ) ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :